# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 692 (754) |
| ಮಾನ್ಯ ಸದಸ್ಯರ ಹೆಸರು | ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್)<br>(ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 21/08/2026 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸಂಖ್ಯೆ ಎಷ್ಟು; ಕಳೆದ 3 ವರ್ಷಗಳಲ್ಲಿ ಅವರಿಗೆ ನೀಡಿರುವ ವಿವಿಧ ಸೌಲಭ್ಯಗಳಿಗೆ ಖರ್ಚಾದ ಅನುದಾನ ಎಷ್ಟು; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಪ್ರಸ್ತುತ ಒಟ್ಟು 20.40 ಲಕ್ಷ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಮಂಡಳಿಯ ಫಲಾನುಭವಿಗಳನ್ನಾಗಿ ನೋಂದಣಿ ಮಾಡಲಾಗಿರುತ್ತದೆ. ಕಳೆದ 3 ವರ್ಷಗಳಲ್ಲಿ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳಡಿ ಒಟ್ಟು ರೂ.3626.38 ಕೋಟಿಯಷ್ಟು ಮೊತ್ತವನ್ನು ಖರ್ಚು ಮಾಡಲಾಗಿರುತ್ತದೆ. |
| ಆ) | ಕಟ್ಟಡ ಕಾರ್ಮಿಕರ ಮಕ್ಕಳಿಗೆ ನೀಡಲಾಗುವ ಶೈಕ್ಷಣಿಕ ಸಹಾಯಧನ ಎಷ್ಟು; ಅರ್ಜಿ ಸಲ್ಲಿಸಿದ ಎಷ್ಟು ವಿದ್ಯಾರ್ಥಿಗಳಿಗೆ ಇದುವರೆಗೆ ಸಹಾಯಧನ ನೀಡಲಾಗಿದೆ; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕರ್ನಾಟಕ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ನೋಂದಾಯಿತ ಕಾರ್ಮಿಕರ ಮಕ್ಕಳಿಗೆ ನೀಡಲಾಗುತ್ತಿರುವ ಶೈಕ್ಷಣಿಕ ಸಹಾಯಧನದ ವಿವರಗಳನ್ನು **ಅನುಬಂಧದಲ್ಲಿ** ಒದಗಿಸಿದೆ. ಮಂಡಳಿಯ ಪ್ರಾರಂಭದಿಂದ ಇದುವರೆಗೂ, ಶೈಕ್ಷಣಿಕ ಸಹಾಯಧನ ಯೋಜನೆಯಡಿ ಅರ್ಜಿ ಸಲ್ಲಿಸಿದ ಫಲಾನುಭವಿಗಳ ಪೈಕಿ ಒಟ್ಟು 28.68 ಲಕ್ಷ ವಿದ್ಯಾರ್ಥಿಗಳಿಗೆ ಸಹಾಯಧನ ನೀಡಲಾಗಿರುತ್ತದೆ. |
| ಇ) | ಕಾರ್ಮಿಕ ಇಲಾಖೆಯಲ್ಲಿ ನೋಂದಾಯಿಸಿ ಕೊಂಡಿರುವ ಅಸಂಘಟಿತ ಕಾರ್ಮಿಕರ ಸಂಖ್ಯೆ ಎಷ್ಟು; ನೋಂದಣಿ ಪ್ರಕ್ರಿಯೆಯನ್ನು ಸರಳಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಮಂಡಳಿಗಳು ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸಿಕೊಂಡಿರುವ ಸಂಖ್ಯೆಯ ವಿವರ ಮತ್ತು ನೋಂದಣಿ ಪ್ರಕ್ರಿಯೆಗೆ ಕೈಗೊಂಡಿರುವ ಕ್ರಮಗಳ ವಿವರ ಈ ಕೆಳಕಂಡಂತಿದೆ.<br><br>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ :**<br><br>ಅಸಂಘಟಿತ ವಲಯಕ್ಕೆ ಸೇರಿದ ಒಟ್ಟು 20.40 ಲಕ್ಷ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಮಂಡಳಿಯ ಫಲಾನುಭವಿಗಳನ್ನಾಗಿ ನೋಂದಣಿ ಮಾಡಲಾಗಿರುತ್ತದೆ. |

ಮಂಡಳಿಯಲ್ಲಿ ಅರ್ಹ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಫಲಾನುಭವಿಗಳನ್ನಾಗಿ ನೋಂದಾಯಿಸಲು ನೋಂದಣಿ ಪ್ರಕ್ರಿಯೆಯನ್ನು ಆನ್‌ಲೈನ್ ಮೂಲಕ ಮಾಡಲಾಗುತ್ತಿದ್ದು, ಕನಿಷ್ಠ ದಾಖಲೆಗಳನ್ನು ಪಡೆಯುವ ಮೂಲಕ ಸರಳೀಕರಣಗೊಳಿಸಲಾಗಿರುತ್ತದೆ. ನೋಂದಣಿಗೆ ಈ ಕೆಳಕಂಡ ದಾಖಲೆಗಳನ್ನು ಮಾತ್ರ ಪಡೆಯಲಾಗುತ್ತಿದೆ.

1. ವರ್ಷದಲ್ಲಿ ಕನಿಷ್ಠ 90 ದಿನ ಕೆಲಸ ಮಾಡಿದ ದಾಖಲೆಯ ದೃಢೀಕರಣ,
2. ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ,
3. ಆಧಾರ್ ಕಾರ್ಡ್ ಪ್ರತಿ.

ನೋಂದಣಿ ಪ್ರಕ್ರಿಯೆಯನ್ನು ಸಕಾಲ ಯೋಜನೆ ವ್ಯಾಪ್ತಿಗೆ ಸೇರಿಸಿದ್ದು, ಆ ಮೂಲಕ ಅರ್ಜಿ ಸಲ್ಲಿಸಿದ 15 ದಿನದೊಳಗಾಗಿ ನೋಂದಣಿ ಪ್ರಕ್ರಿಯೆ ಮಾಡಲಾಗುತ್ತಿದೆ

**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:**

ಈ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಹಾಗೂ ಕೇಂದ್ರ ಸರ್ಕಾರದ ಇ-ಶ್ರಮ್ ಕಾರ್ಯಕ್ರಮಡಿ ನೋಂದಾಯಿತರಾದ ಅಸಂಘಟಿತ ಕಾರ್ಮಿಕರ ವಿವರ ಈ ಕೆಳಕಂಡಂತಿದೆ.

| ಕ್ರ. ಸಂ | ಯೋಜನೆ | ಕಾರ್ಮಿಕರ ಸಂಖ್ಯೆ |
|---|---|---|
| 1 | ಅಂಬೇಡ್ಕರ್‌ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ ನೋಂದಣಿ (102 ಅಸಂಘಟಿತ ವರ್ಗಗಳ ಕಾರ್ಮಿಕರು) | 26,03,851 |
| 2 | ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ | |
| 3 | ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ | 10,78,030 |
| 4 | ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ | 30,256 |
| 5 | ಕರ್ನಾಟಕ ರಾಜ್ಯ ದಿನಪತ್ರಿಕೆ ಹಾಗೂ ಹಾಲು ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ: | 11,388 |
| 6 | ಇ-ಶ್ರಮ್ ಕಾರ್ಯಕ್ರಮದಡಿ ನೋಂದಣಿ | 1,11,53,055 |

ಮಂಡಳಿಯು ಜಾರಿಗೊಳಿಸುತ್ತಿರುವ ಮೇಲ್ಕಂಡ ಯೋಜನೆಗಳಡಿ ಆನ್‌ಲೈನ್ ಪೋರ್ಟಲ್ ಮೂಲಕ ಅರ್ಹ ಕಾರ್ಮಿಕರು ಸ್ವಯಂ ನೋಂದಣಿ ಮಾಡಿಕೊಳ್ಳಬಹುದಾಗಿರುತ್ತದೆ. ನೋಂದಣಿ ಪ್ರಕ್ರಿಯೆ ಬಹಳ

| | | |
|---|---|---|
| | | ಸರಳವಾಗಿದ್ದು, ಇತ್ತೀಚಿನ ಭಾವಚಿತ್ರ, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಪುಸ್ತಕ ಹಾಗೂ ಸ್ವಯಂ ಧೃಢೀಕರಣ ದೊಂದಿಗೆ ನೋಂದಣಿ ಮಾಡಿಕೊಳ್ಳಬಹುದಾಗಿರುತ್ತದೆ. |
| ಈ) | ಮಹಿಳಾ ಕಾರ್ಮಿಕರಿಗೆ ಸುರಕ್ಷಿತ ಕೆಲಸದ ವಾತಾವರಣ ಕಲ್ಪಿಸಲು ಹಾಗೂ ಕೆಲಸದ ಸ್ಥಳದಲ್ಲಿ ಲೈಂಗಿಕ ಕಿರುಕುಳ ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಮಹಿಳಾ ಕಾರ್ಮಿಕರಿಗೆ ಸುರಕ್ಷಿತ ಕೆಲಸದ ವಾತಾವರಣ ಕಲ್ಪಿಸಲು ಹಾಗೂ ಕೆಲಸದ ಸ್ಥಳದಲ್ಲಿ ಲೈಂಗಿಕ ಕಿರುಕುಳ ತಡೆಗಟ್ಟುವ ನಿಟ್ಟಿನಲ್ಲಿ ಮಹಿಳೆ ಉದ್ಯೋಗಿಗಳು ಕೆಲಸ ನಿರ್ವಹಿಸುವ ಸಂಸ್ಥೆಗಳಲ್ಲಿ ಆಂತರಿಕ ದೂರು ನಿರ್ವಹಣಾ ಸಮಿತಿಯನ್ನು ರಚಿಸುವುದು ಕಡ್ಡಾಯವಾಗಿರುತ್ತದೆ. ಅಂತಹ ಸಮಿತಿಯಲ್ಲಿ ಮಹಿಳಾ ಕಾರ್ಮಿಕರು ಲೈಂಗಿಕ ಶೋಷಣೆ ಸಂಬಂಧಿಂತ ದೂರು ಸಲ್ಲಿಸಬಹುದಾಗಿದ್ದು, ದೂರು ನಿವಾರಣಾ ಸಮಿತಿಯು ವಿಚಾರಣೆ ನಡೆಸಿ ವರದಿಯನ್ನು ಸಂಸ್ಥೆಯ ಮಾಲೀಕರಿಗೆ ಸಲ್ಲಿಸಬೇಕಿರುತ್ತದೆ. ವರದಿಯ ಆಧಾರದ ಮೇಲೆ ಸಂಸ್ಥೆಯು ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುತ್ತದೆ.<br><br>ಮುಂದುವರೆದು, ಆಂತರಿಕ ದೂರು ನಿವಾರಣಾ ಸಮಿತಿಯು ನೀಡುವ ವರದಿಯನ್ನು ಪ್ರಶ್ನಿಸಿ ಬಾಧಿತರು "ಉದ್ಯೋಗಸ್ಥ ಮಹಿಳೆಯರಿಗೆ ಕೆಲಸದ ಸ್ಥಳದಲ್ಲಿ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ ರದ್ದತಿ ಮತ್ತು ಪರಿಹಾರ) ಕಾಯ್ದೆ 2013 ರ ಕಲಂ 18 ರಡಿ ಮೇಲ್ಮನವಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ." |
| ಉ) | ವಲಸೆ ಕಾರ್ಮಿಕರ ನೋಂದಣಿ ಮತ್ತು ಅವರ ಮಕ್ಕಳ ಶಿಕ್ಷಣ, ಆರೋಗ್ಯ ಹಾಗೂ ವಸತಿ ಸೌಲಭ್ಯಗಳಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿವಲಸೆ ಕಾರ್ಮಿಕರು ಸೇರಿದಂತೆ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕೆಲಸ ಮಾಡುವ ಕಾರ್ಮಿಕರನ್ನು ನೋಂದಣಿ ಮಾಡಲಾಗುತ್ತದೆ. ನೋಂದಣಿಯಾದ ಎಲ್ಲಾ ಕಾರ್ಮಿಕರಿಗೂ ಮಂಡಳಿಯಲ್ಲಿ ರೂಪಿಸಿರುವ ಯೋಜನೆಗಳ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br><br>ವಲಸೆ ಕಾರ್ಮಿಕರಿಗೆ ತಾತ್ಕಾಲಿಕ ವಸತಿ ಸೌಲಭ್ಯ ಕಲ್ಪಿಸಲು ರಾಜ್ಯದ 08 ಜಿಲ್ಲೆಗಳ 10 ಸ್ಥಳಗಳಲ್ಲಿ ತಾತ್ಕಾಲಿಕ ವಸತಿ ಸಮುಚ್ಛಯಗಳನ್ನು ನಿರ್ಮಿಸಲಾಗಿದ್ದು, ಆ ಮೂಲಕ ವಲಸೆ ಕಾರ್ಮಿಕರಿಗೆ ತಾತ್ಕಾಲಿಕ ವಸತಿ ಕಲ್ಪಿಸಲು ಕ್ರಮವಹಿಸಲಾಗಿರುತ್ತದೆ.<br><br>ಮಂಡಳಿಯಲ್ಲಿ ನೊಂದಾಯಿಸಲ್ಪಟ್ಟ ಕಾರ್ಮಿಕರ ಮಕ್ಕಳ ಹಾಗೂ ಕುಟುಂಬದವರು ಆರೋಗ್ಯ ಮತ್ತು ಶಿಕ್ಷಣಕ್ಕಾಗಿ ಮಂಡಳಿಯಿಂದ ನೀಡಲ್ಪಡುವ ಸೌಲಭ್ಯಗಳನ್ನು ಪಡೆಯಲು ಅರ್ಹರಿರುತ್ತಾರೆ. |

**ಕಾಇ 457 ಎಲ್‌ಇಟಿ 2026**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಡಿ. ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 754(692) ಕ್ಕೆ ಅನುಬಂಧ**

**ಕರ್ನಾಟಕ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ನೋಂದಾಯಿತ ಕಾರ್ಮಿಕರ ಮಕ್ಕಳಿಗೆ ನೀಡಲಾಗುವ ಶೈಕ್ಷಣಿಕ ಸಹಾಯಧನದ ವಿವರ**

| ಕ್ರ. ಸಂ | ಕೋರ್ಸ್/ತರಗತಿ | ತರಗತಿ/ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) | ಸ್ನಾತಕೋತ್ತರ ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) |
|---|---|---|---|
| 1 | 1ನೇ ತರಗತಿಯಿಂದ 5ನೇ ತರಗತಿ | 1,800/- | - |
| 2 | 6ನೇ ತರಗತಿಯಿಂದ 8ನೇ ತರಗತಿ | 2,400/- | - |
| 3 | 9 ಮತ್ತು 10ನೇ ತರಗತಿ | 3,000/- | - |
| 4 | ಪಿಯುಸಿ, 11 ಹಾಗೂ 12ನೇ ತರಗತಿ ಅಥವಾ ತತ್ಸಮಾನ ಕೋರ್ಸ್. | 6,000/- | - |
| 5 | 10ನೇ ತರಗತಿ ನಂತರದ ಐಟಿಐ/ ತತ್ಸಮಾನ ತಾಂತ್ರಿಕ ಕೋರ್ಸ್ ಗಳು | 10,000/- | - |
| 6 | ಪಿಯುಸಿ ನಂತರದ ಯಾವುದೇ ಡಿಪ್ಲೋಮ ತರಗತಿ. | 12,000/- | - |
| 7 | ಸಾಮಾನ್ಯ ಪದವಿ (ಜನರಲ್ ಡಿಗ್ರಿ) - ಬಿಎ, ಬಿಕಾಂ, ಬಿಎಸ್ಸಿ ಮುಂತಾದವಗಳು | 15,000/- | 20,000/- |
| 8 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ Vocational ವೃತ್ತಿಪರ ಕೋರ್ಸ್ ಳು ಕಾನೂನು ಪದವಿ ಸಹಿತ (Professional Courses) | 20,000/- | 25,000/- |
| 9 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ತಾಂತ್ರಿಕ ವೃತ್ತಿಪರ ಕೋರ್ಸ್ ಗಳು (Professional Courses) | 25,000/- | 35,000/- |
| 10 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ಅರೆ ವೈದ್ಯಕೀಯ ವೃತ್ತಿಪರ ಕೋರ್ಸ್ ಗಳು (Para Medical Courses) | 20,000/- | 25,000/- |
| 11 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ವೈದ್ಯಕೀಯ ವೃತ್ತಿಪರ ಕೋರ್ಸ್ ಗಳು (Professional Courses) | 25,000/- | 35,000/- |
| 12 | ರಾಷ್ಟ್ರೀಯ ಕಾನೂನು ಶಾಲೆಗಳಿಗೆ ಸಮನಾದ ಕಾನೂನು ವಿದ್ಯಾ ಸಂಸ್ಥೆಗಳು | 40,000/- | 50,000/- |
| 13 | ಪಿಹೆಚ್‌ಡಿ/ಎಮ್‌ಫಿಲ್ (03 ವರ್ಷ ಅವಧಿಯವರೆಗೆ) | 40,000/- | - |
| 14 | IIT, IIIT, AIMS, IISc, IISERC ಪ್ರತಿಷ್ಠಿತ ರಾಷ್ಟ್ರೀಯ ವಿದ್ಯಾಸಂಸ್ಥೆಗಳು. | 50,000/- | 60,000/- |